ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಹುಬ್ಬಳ್ಳಿ ಮಹಾನಗರ ಪಾಲಿಕೆಯ ಹೊಸೂರ ವಾಣಿಜ್ಯ ಸಂಕೀರ್ಣ ಕಟ್ಟಡ ಶಿಥಿಲಾವಸ್ಥೆಯಲ್ಲಿರುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-

156 (248) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ವತಿಯಿಂದ ಹೊಸೂರಿನಲ್ಲಿ ಕಟ್ಟಿದ ವಾಣಿಜ್ಯ ಮಳಿಗೆಗಳ ಸಂಕೀರ್ಣ ಕಟ್ಟಡವನ್ನು ನಿರ್ಮಿಸಿದ್ದು ಯಾವಾಗ ಮತ್ತು ಅಲ್ಲಿ ಎಷ್ಟು ಮಳಿಗೆಗಳನ್ನು ಬಾಡಿಗೆಗೆ ಕೊಡಲಾಗಿದೆ ;

(ಆ) ಶಿಥಿಲಾವಸ್ಥೆಯಲ್ಲಿರುವ ಸದರಿ ಕಟ್ಟಡವನ್ನು ತೆರವುಗೊಳಿಸಿ ಅದನ್ನು ಸಂಪೂರ್ಣವಾಗಿ ಒಡೆದು ಹಾಕಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ಸದರಿ ಕಟ್ಟಡದಲ್ಲಿ ಡಾ: ಎಚ್.ಟಿ.ಗಂಗಲ್ ವೈದ್ಯಕೀಯ ಸಂಶೋಧನಾ ಕೇಂದ್ರ ಪ್ರಾರಂಭವಾಗಿ ಸುಮಾರು ವರ್ಷ ಕಳೆದರೂ ಇನ್ನೂವರೆಗೆ ಆ ಕಟ್ಟಡ ಸರಿಯಾದ ರೀತಿಯಿಂದ ದುರಸ್ಥಿ ಆಗದೇ ಸಂಪೂರ್ಣ ಶಿಥಿಲಾವಸ್ಥೆಯಲ್ಲಿರುವುದರಿಂದ ತಕ್ಷಣ ಸರ್ಕಾರ ಕ್ರಮ ಕೈಗೊಳ್ಳುವುದೇ ?